# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 133 (118)
ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 05.03.2025
ಉತ್ತರಿಸುವ ಸಚಿವರು : ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
| --- | --- | --- |
| (ಅ) | ರಾಜ್ಯದಲ್ಲಿ ಭೂ ಪರಿವರ್ತನೆಗೊಂಡ ಒಂದು ಎಕರೆ ಒಳಗಿನ ಜಮೀನುಗಳಿಗೆ ಏಕ ನಿವೇಶನದ ತಾಂತ್ರಿಕ ಅನುಮೋದನೆಯನ್ನು ಯೋಜನಾ ಪ್ರಾಧಿಕಾರದಿಂದ ಪಡೆಯಬೇಕೆಂಬ ಹೊಸ ಪದ್ಧತಿಯಿಂದಾಗಿ ಗ್ರಾಮೀಣ ಭಾಗದ ಜನರು ಸಾಕಷ್ಟು ಹೈರಾಣಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪತ್ರ ಸಂಖ್ಯೆ: ಗ್ರಾಅಪ 86 ಗ್ರಾಪಂಅ 2014, ದಿನಾಂಕ:11-11-2014 ರ ಕೈಪಿಡಿಯಂತೆ ಸ್ಥಳಿಯ ಯೋಜನಾ ಪ್ರದೇಶದ ಹೊರಭಾಗದಲ್ಲಿ 01 ಎಕರೆಗಿಂತ ಕಡಿಮೆ ಇರುವ ಪ್ರದೇಶಕ್ಕೆ ಸಂಬಂಧಿಸಿದ ಗ್ರಾಮ/ ತಾಲ್ಲೂಕು ಪಂಚಾಯತಿಗಳಿಂದ ವಿನ್ಯಾಸ ಅನುಮೋದನೆ ನೀಡಲಾಗುತ್ತಿತ್ತು.<br><br>ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ನ್ನು ಉಲ್ಲಂಘಿಸಿ, ಗ್ರಾಮ ಪಂಚಾಯಿತಿಗಳಿಂದ/ ನಗರ ಸ್ಥಳೀಯ ಸಂಸ್ಥೆಗಳಿಂದ ಅನುಮೋದಿಸುತ್ತಿರುವುದನ್ನು ತಡೆಗಟ್ಟುವ ಬಗ್ಗೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾದ ಅರ್ಜಿ ಸಂಖ್ಯೆ:19033/2023 ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ:15-11-2023 ರಂದು ನೀಡಿರುವ ದೈನಂದಿನ ಆದೇಶದಂತೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4-ಕೆ ಉಲ್ಲಂಘನೆಯಾಗದಂತೆ ಹಾಗೂ ಗ್ರಾಮ ಪಂಚಾಯತಿ / ತಾಲ್ಲೂಕು ಪಂಚಾಯತಿಗಳಲ್ಲಿ ತಾಂತ್ರಿಕ ಸಿಬ್ಬಂದಿಗಳು ಇಲ್ಲದಿರುವುದನ್ನು ಮನಗೊಂಡು ಸರ್ಕಾರದ ಆದೇಶ ಸಂಖ್ಯೆ:ನಅಇ 93 ಎಂಡಬ್ಲ್ಯೂಪಿ 2023(ಭಾ-1), ದಿನಾಂಕ:09-01-2024 ಮತ್ತು ಸರ್ಕಾರದ ಸುತ್ತೋಲೆ ಸಂಖ್ಯೆ:ನಅಇ 93 ಎಂಡಬ್ಲ್ಯೂಪಿ 2023(ಭಾ-1), ದಿನಾಂಕ:28-08-2024 ರ ಆದೇಶಗಳನ್ನು ಹೊರಡಿಸಿರುತ್ತದೆ**(ಅನುಬಂಧ-1)**.<br><br>ಅದರಂತೆ, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ವಿನ್ಯಾಸ ಅನುಮೋದನೆ ಪಡೆಯಬೇಕಿರುತ್ತದೆ. ಇದರಿಂದ ಗ್ರಾಮೀಣ ಭಾಗದ ಜನರಿಗೆ ಯಾವುದೇ ತೊಂದರೆ ಉಂಟಾಗಿರುವುದಿಲ್ಲ. |

| | | |
|---|---|---|
| (ಆ) | ಬಂದಿದ್ದಲ್ಲಿ, ಈ ಹೊಸ ನಿಯಮದಿಂದಾಗಿ ಮನೆ ನಿರ್ಮಾಣಕ್ಕೆ ಬ್ಯಾಂಕ್‌ನಿಂದ ಸಾಲ ಪಡೆಯಲು ಆರ್ಥಿಕ ಸಂಕಷ್ಟದ ಕಾರಣಕ್ಕೆ ಜಮೀನು ಮಾರಾಟ ಮಾಡುವ ಅನಿವಾರ್ಯತೆ ಇರುವ ಬಡ ಹಾಗೂ ಮಧ್ಯಮ ವರ್ಗದ ಜನ ಸಾಕಷ್ಟು ಹೈರಾಣಾಗಿದ್ದು, ಈ ಸಮಸ್ಯೆ ಬಗೆಹರಿಸುವ ಸಲುವಾಗಿ ಸರ್ಕಾರ ಇದುವರೆಗೆ ಯಾವ ಕ್ರಮಗಳನ್ನು ಕೈಗೊಂಡಿದೆ; | ಆದಾಗ್ಯೂ, ಜನಸಾಮಾನ್ಯರಿಗೆ ತ್ವರಿತವಾಗಿ ಸೇವೆಯನ್ನು ಒದಗಿಸಲು ಕರಾವಳಿ ಪ್ರದೇಶಕ್ಕಾಗಿ (ದಕ್ಷಿಣ ಕನ್ನಡ, ಉತ್ತರ ಕನ್ನಡ ಹಾಗೂ ಉಡುಪಿ) ಸರ್ಕಾರದ ಆದೇಶ ಸಂಖ್ಯೆ: ನಅಇ 292 ಮೈಅಪ್ರಾ 2024, ದಿನಾಂಕ:07-08-2024 ರನ್ವಯ, ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಗೆ ಒಳಪಡದೇ ಇರುವ ಗ್ರಾಮ ಪಂಚಾಯತಿಯಲ್ಲಿನ ಒಂದು (01) ಎಕರೆ ಒಳಗಿನ ಜಮೀನುಗಳಿಗೆ ಅನುಮೋದನೆ ನೀಡುವ ಪ್ರಕರಣಗಳಿಗೆ ತಾಂತ್ರಿಕ ಅನುಮೋದನೆ ನೀಡಲು ಸಹಾಯಕ ನಿರ್ದೇಶಕರ ಕಛೇರಿ ಹಾಗೂ ಹತ್ತಿರದ ಯೋಜನಾ ಪ್ರಾಧಿಕಾರಗಳ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಅಧಿಕಾರಿಗಳಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದೆ ಹಾಗೂ ತಾಲ್ಲೂಕು ಪಂಚಾಯತಿ ಕಛೇರಿಯಲ್ಲಿಯೇ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಅಧಿಕಾರಿಗಳು ಕಾರ್ಯನಿರ್ವಹಿಸಲು ಆದೇಶಿಸಲಾಗಿದೆ **(ಅನುಬಂಧ-2)**.<br><br>ಗ್ರಾಮೀಣ ಭಾಗದ ಜನರಿಗೆ ಯಾವುದೇ ತೊಂದರೆಯಾಗದಂತೆ, ಸದರಿ ಅರ್ಜಿಗಳನ್ನು ಕಾಲಮಿತಿಯೊಳಗೆ / ತ್ವರಿತವಾಗಿ ನಿರ್ವಹಿಸಲು ಇಲಾಖಾ ಮಟ್ಟದಲ್ಲಿ ಅವಶ್ಯಕತೆಗಳಿಗನುಗುಣವಾಗಿ ಸಿಬ್ಬಂದಿಗಳನ್ನು ನೇಮಿಸಿ ಕ್ರಮವಹಿಸಲಾಗುತ್ತಿದೆ ಹಾಗೂ ಅಗತ್ಯ ಸೂಚನೆಗಳನ್ನು ನೀಡಲಾಗುತ್ತಿದೆ. |
| (ಇ) | ತಾಂತ್ರಿಕ ಕಾರಣ, ಸಿಬ್ಬಂದಿ ಕೊರತೆ ಹಾಗೂ ಕಠಿಣ ನಿಯಮಾವಳಿಗಳಿಂದಾಗಿ ಅರ್ಜಿಗಳ ವಿಲೇವಾರಿಗೆ ಪ್ರಸ್ತುತ ತುಂಬಾ ಸಮಯ ತೆಗೆದುಕೊಳ್ಳುತ್ತಿದ್ದು, ಆ ಕಾರಣದಿಂದಾಗಿ ಗ್ರಾಮೀಣ ಜನರಿಗೆ ಸಾಕಷ್ಟು ತೊಂದರೆಯಾಗುತ್ತಿದ್ದು, ಯಾವ ಕಾಲಮಿತಿಯೊಳಗೆ ಸದರಿ ಸಮಸ್ಯೆಯನ್ನು ಬಗೆಹರಿಸಲು ಅಗತ್ಯ ಕ್ರಮ ವಹಿಸಲಾಗುವುದು? | |

ಕಡತ ಸಂಖ್ಯೆ: ನಅಇ 97 ಮೈಅಪ್ರಾ 2025

**(ಬಿ.ಎಸ್.ಸುರೇಶ)**

ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು.

ಅನುಬಂಧ-1

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ
ಕ್ರಮ ಸಂಖ್ಯೆ: 7/6508
ದಿನಾಂಕ: 17/1/24
ಬೆಂಗಳೂರು

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ಅನ್ನು ಉಲ್ಲಂಘಿಸಿ ಗ್ರಾಮ ಪಂಚಾಯಿತಿಗಳಿಂದ / ನಗರ ಸ್ಥಳೀಯ ಸಂಸ್ಥೆಗಳಿಂದ ವಿನ್ಯಾಸ ಅನುಮೋದಿಸುತ್ತಿರುವುದನ್ನು ತಡೆಗಟ್ಟುವ ಬಗ್ಗೆ.

**ಓದಲಾಗಿದೆ:** ಉಚ್ಚ ನ್ಯಾಯಾಲಯದಲ್ಲಿ ದಾಖಲಾದ ರಿಟ್ ಅರ್ಜಿ ಸಂಖ್ಯೆ: 19033/2023 ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 15.11.2023 ರಂದು ನೀಡಿರುವ ದೈನಂದಿನ ಆದೇಶ.

**ಪ್ರಸ್ತಾವನೆ:**

ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾದ ರಿಟ್ ಅರ್ಜಿ ಸಂಖ್ಯೆ: 19033/2023 ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 15.11.2023 ರಂದು ನೀಡಿರುವ ದೈನಂದಿನ ಆದೇಶದಲ್ಲಿ, ಯೋಜನಾ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಗ್ರಾಮ ಪಂಚಾಯಿತಿಯಿಂದ / ನಗರ ಸ್ಥಳೀಯ ಸಂಸ್ಥೆಗಳಿಂದ ವಿನ್ಯಾಸ ಮಂಜೂರಾಗಿದ್ದು, ಇದು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17 ರಲ್ಲಿ ಕಲ್ಪಿಸಿರುವ ಅವಕಾಶಕ್ಕೆ ವ್ಯತಿರಿಕ್ತವಾಗಿರುತ್ತದೆ. ಈ ಅನುಮೋದನೆಯ ವಿರುದ್ಧ ದೂರು ಸ್ವೀಕರಿಸಿದ ಹಿನ್ನೆಲೆಯಲ್ಲಿ ವಿನ್ಯಾಸ ನಕ್ಷೆ ಮತ್ತು ಖಾತೆಗಳನ್ನು ರದ್ದುಗೊಳಿಸಿ ಆದೇಶಿಸಲಾಗಿರುತ್ತದೆ. ಇದು, ಮೂರನೇ ವ್ಯಕ್ತಿಯ / ಖರೀದಿದಾರರ ಹಿತಾಸಕ್ತಿಗಳನ್ನು ಒಳಗೊಂಡಿದ್ದು, ಅನಾವಶ್ಯಕ ವಿವಾದಗಳಿಗೆ ಕಾರಣವಾಗುವುದರಿಂದ, ಇಂತಹ ಸಮಸ್ಯೆಗಳನ್ನು ನಿಯಂತ್ರಿಸಲು ಒಂದು ರೂಪರೇಷೆಗಳನ್ನು ರಚಿಸಲು ಮಾನ್ಯ ಉಚ್ಚ ನ್ಯಾಯಾಲಯವು ಸೂಚಿಸಿರುತ್ತದೆ. ಮುಂದುವರೆದು, ಇಂತಹ ಪ್ರಕರಣಗಳು ಭವಿಷ್ಯದಲ್ಲಿ ಪುನರಾವರ್ತಿಯಾಗದಂತೆ ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರದ ವಿವರಣೆ ನೀಡುವಂತೆ ಸೂಚಿಸಿರುತ್ತದೆ.

NO 16|1|2024

ಆದುದರಿಂದ, ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 15.11.2023 ರಂದು ನೀಡಿರುವ ದೈನಂದಿನ ಆದೇಶದನ್ವಯ ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ: 22.12.2023 ರಂದು, ಸಂಬಂಧಪಟ್ಟ ಇಲಾಖೆಗಳೊಂದಿಗೆ ನಡೆದ ಸಮಾಲೋಚನಾ ಸಭೆಯಲ್ಲಿ ಇಂತಹ ಪ್ರಕರಣಗಳನ್ನು ನಿಯಂತ್ರಿಸುವ ಕುರಿತು ಸುದೀರ್ಘವಾಗಿ ಚರ್ಚಿಸಲಾಗಿದೆ. ಸದರಿ ಸಭೆಯಲ್ಲಿ ಚರ್ಚಿಸಿ ಕೈಗೊಂಡ ನಿರ್ಣಯದಂತೆ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 93 ಎಂಡಬ್ಲ್ಯೂಪಿ 2023 (ಭಾ-1),**
**ದಿನಾಂಕ: 09.01.2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ನ್ನು ಉಲ್ಲಂಘಿಸಿ ಗ್ರಾಮ ಪಂಚಾಯಿತಿಗಳಿಂದ / ನಗರ ಸ್ಥಳೀಯ ಸಂಸ್ಥೆಗಳಿಂದ ವಿನ್ಯಾಸ ಅನುಮೋದಿಸುತ್ತಿರುವುದನ್ನು ತಡೆಗಟ್ಟಲು ಈ ಕೆಳಕಂಡ ಅಂಶಗಳನ್ನು ಕಟ್ಟುನಿಟ್ಟಾಗಿ ಪರಿಪಾಲಿಸುವಂತೆ ಕ್ರಮವಹಿಸಲು ಆದೇಶಿಸಿದೆ.

TP-5 17/1/24

1. ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 15.11.2023 ರಂದು ರಿಟ್ ಅರ್ಜಿ ಸಂಖ್ಯೆ: 19033/2023 ಪ್ರಕರಣದಲ್ಲಿ ನೀಡಿರುವ ದೈನಂದಿನ ಆದೇಶದಲ್ಲಿ, ಗ್ರಾಮ ಪಂಚಾಯತಿಗಳು ತಮ್ಮ ಅಧಿಕಾರ ವ್ಯಾಪ್ತಿ ಇಲ್ಲದಿದ್ದರೂ ಸಹಾ ವಿನ್ಯಾಸಗಳಿಗೆ ಅನುಮೋದನೆ ನೀಡುತ್ತಿರುವುದನ್ನು ತಡೆಗಟ್ಟಲು ಆದೇಶಿಸಿರುತ್ತದೆ. ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17 ರಡಿಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರಗಳು / ಯೋಜನಾ ಪ್ರಾಧಿಕಾರಗಳು ವಿನ್ಯಾಸ ಅನುಮೋದಿಸಲು ಸಕ್ಷಮ ಪ್ರಾಧಿಕಾರಗಳಾಗಿರುತ್ತವೆ. ನಗರಾಭಿವೃದ್ಧಿ ಪ್ರಾಧಿಕಾರಗಳು / ಯೋಜನಾ ಪ್ರಾಧಿಕಾರಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತಿಗಳು / ನಗರ ಸ್ಥಳೀಯ ಸಂಸ್ಥೆಗಳು ವಿನ್ಯಾಸ ಅನುಮೋದನೆ ನೀಡತಕ್ಕದ್ದಲ್ಲ.

2. ಸ್ಥಳೀಯ ಯೋಜನಾ ಪ್ರದೇಶವನ್ನು ಹೊರತುಪಡಿಸಿ ಇತರೆ ಪ್ರದೇಶಗಳಲ್ಲಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 4-K ರ ಅವಕಾಶದಂತೆ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು ಅಥವಾ ಅಧಿಕೃತ ಅಧಿಕಾರಿಯು ವಿನ್ಯಾಸ ಅನುಮೋದಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತಾರೆ. ಇಂತಹ ಪ್ರದೇಶಗಳಲ್ಲಿ ಗ್ರಾಮ ಪಂಚಾಯತಿಗಳು / ನಗರ ಸ್ಥಳೀಯ ಸಂಸ್ಥೆಗಳು ವಿನ್ಯಾಸ ಅನುಮೋದನೆ ನೀಡತಕ್ಕದ್ದಲ್ಲ.
3. ಗ್ರಾಮ ಪಂಚಾಯಿತಿಗಳು / ನಗರ ಸ್ಥಳೀಯ ಸಂಸ್ಥೆಗಳು, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರಡಿಯಲ್ಲಿ ಯೋಜನಾ ಪ್ರಾಧಿಕಾರ / ನಗರಾಭಿವೃದ್ಧಿ ಪ್ರಾಧಿಕಾರ / ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು ಅಥವಾ ಅಧಿಕೃತ ಅಧಿಕಾರಿಯಿಂದ ವಿನ್ಯಾಸ ಅನುಮೋದಿಸಿರುವ ಬಗ್ಗೆ ಖಚಿತಪಡಿಸಿಕೊಂಡ ನಂತರವೇ ಖಾತಾಗಳನ್ನು ನೀಡತಕ್ಕದ್ದು.
4. ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯೊಳಗೆ, ಕಾಯ್ದೆಯಲ್ಲಿನ ಅವಕಾಶಗಳನ್ನು ಉಲ್ಲಂಘಿಸಿದ್ದಲ್ಲಿ, ಕಲಂ 17(4) ರಡಿ ಅದನ್ನು ತಡೆಗಟ್ಟಲು ಅಗತ್ಯ ಕ್ರಮ ಕೈಗೊಳ್ಳುವುದು ಪ್ರಾಧಿಕಾರಗಳ ಜವಾಬ್ದಾರಿಯಾಗಿರುತ್ತದೆ.
5. ಸ್ಥಳೀಯ ಯೋಜನಾ ಪ್ರದೇಶವನ್ನು ಹೊರತುಪಡಿಸಿ ಇತರೆ ಪ್ರದೇಶಗಳಲ್ಲಿ, ಕಾಯ್ದೆಯಲ್ಲಿನ ಅವಕಾಶಗಳನ್ನು ಉಲ್ಲಂಘಿಸಿದ್ದಲ್ಲಿ,ಕಲಂ 4-K(9) ರಡಿ ಅದನ್ನು ತಡೆಗಟ್ಟಲು ಅಗತ್ಯ ಕ್ರಮ ಕೈಗೊಳ್ಳುವುದು ಗ್ರಾಮ ಪಂಚಾಯಿತಿ / ಸ್ಥಳೀಯ ಸಂಸ್ಥೆಗಳ ಜವಾಬ್ದಾರಿಯಾಗಿರುತ್ತದೆ.

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ಅನ್ನು ಉಲ್ಲಂಘಿಸಿ ವಿನ್ಯಾಸಗಳಿಗೆ ಅನುಮೋದನೆ ನೀಡುವ ಗ್ರಾಮ ಪಂಚಾಯಿತಿ ಅಧಿಕಾರಿಗಳ ವಿರುದ್ಧ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಕಟ್ಟುನಿಟ್ಟಿನ ಕ್ರಮವನ್ನು / ಇಲಾಖಾ ವಿಚಾರಣೆಯನ್ನು / ಶಿಸ್ತುಕ್ರಮ ಕೈಗೊಳ್ಳಲಾಗುವುದು. ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಅಧಿಕಾರಿಗಳು / ನೌಕರರುಗಳ ವಿರುದ್ಧ ನಗರಾಭಿವೃದ್ಧಿ ಇಲಾಖೆ ವತಿಯಿಂದ ಕಟ್ಟುನಿಟ್ಟಿನ ಕ್ರಮವನ್ನು / ಇಲಾಖಾ ವಿಚಾರಣೆಯನ್ನು / ಶಿಸ್ತುಕ್ರಮ ಕೈಗೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಸತೀಶ್ ಕಬಾಡಿ
(ಸತೀಶ್ ಕಬಾಡಿ) 9-01-2024
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ
(ಪೌರಾಡಳಿತ-2 ಮತ್ತು ಮಂಡಳಿ)

**ಇವರಿಗೆ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಕಂದಾಯ ಇಲಾಖೆ (ನೋಂದಣಿ ಮತ್ತು ಮುದ್ರಾಂಕ ಇಲಾಖೆ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ವಿ.ವಿ. ಗೋಪುರ, ಬೆಂಗಳೂರು.
5. ನೋಂದಣಿ ಮಹಾಪರಿವೀಕ್ಷಕರು, ನೋಂದಣಿ ಮತ್ತು ಮುದ್ರಾಂಕ ಇಲಾಖೆ, ಬೆಂಗಳೂರು.
6. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕೆ.ಜಿ. ರಸ್ತೆ, ಗಾಂಧಿನಗರ, ಬೆಂಗಳೂರು.
7. ಮಹಾನಗರ ಆಯುಕ್ತರು, ಬಿಎಂಆರ್.ಡಿಎ., ಅಲಿ ಆಸ್ಕರ್ ರಸ್ತೆ, ಬೆಂಗಳೂರು.

8. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, (ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರ ಮುಖಾಂತರ)
10. ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, (ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ರವರ ಮುಖಾಂತರ)
11. ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಆಯುಕ್ತರು / ಪೌರಾಯುಕ್ತರು / ಮುಖ್ಯಾಧಿಕಾರಿ (ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರ ಮುಖಾಂತರ).
12. ಪೌರಾಯುಕ್ತರು, ನೆಲಮಂಗಲ ನಗರಸಭೆ, ನೆಲಮಂಗಲ,
13. ಸದಸ್ಯ ಕಾರ್ಯದರ್ಶಿ, ನೆಲಮಂಗಲ ಯೋಜನಾ ಪ್ರಾಧಿಕಾರ, ನೆಲಮಂಗಲ.
14. ಶಾಖಾ ರಕ್ಷಕ ಕಡತ / ಕಛೇರಿ ಪ್ರತಿ.

ಸಂಖ್ಯೆ: ನಗ್ರಾಯೋ:ಜಂನಿ:87:CIRC:2023-24
ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ:
ನಅಇ 93 ಎಂಡಬ್ಲ್ಯೂಪಿ 2023(ಭಾಗ-1) ಬೆಂಗಳೂರು,
ದಿನಾಂಕ:09-01-2024.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ,
ಬಹುಮಹಡಿಗಳ ಕಟ್ಟಡ, 4ನೇ ಹಂತ,
ಡಾ: ಅಂಬೇಡ್ಕರ್ ವೀದಿ, ಬೆಂಗಳೂರು,
ದಿನಾಂಕ: 18 JAN 2024

ಯಥಾ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.

1. ನಗರ ಮತ್ತು ಗ್ರಾಮಾಂತರ ಯೋಜನಾ ಅಪರ ನಿರ್ದೇಶಕರು, ವಲಯ ಕಛೇರಿ, ಧಾರವಾಡ.
2. ನಗರ ಮತ್ತು ಗ್ರಾಮಾಂತರ ಯೋಜನಾ ಅಪರ ನಿರ್ದೇಶಕರು, ಕರ್ನಾಟಕ ರಾಜ್ಯ ನಗರ ಯೋಜನಾ ಮಂಡಳಿ, ಬೆಂಗಳೂರು.
3. ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಛೇರಿ, ಬೆಂಗಳೂರು/ಮೈಸೂರು/ ಕಲಬುರಗಿ.
4. ಎಲ್ಲಾ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಕಛೇರಿಗಳಿಗೆ.
5. ಆಯುಕ್ತರು, ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು.
6. ಸದಸ್ಯ ಕಾರ್ಯದರ್ಶಿಗಳು, ರಾಜ್ಯದ ಎಲ್ಲಾ ನಗರ ಯೋಜನಾ ಪ್ರಾಧಿಕಾರಗಳು.
7. ಮುಖ್ಯಾಧಿಕಾರಿಗಳು/ಆಯುಕ್ತರು, ಪುರಸಭೆ/ನಗರಸಭೆ ಯೋಜನಾ ಪ್ರಾಧಿಕಾರಗಳು.
8. ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿ ಹಾಗೂ ತಾಂತ್ರಿಕ ಸಿಬ್ಬಂದಿಗಳಿಗೆ.
9. ಸದರಿ ಸುತ್ತೋಲೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು ಸಂಬಂಧಪಟ್ಟ ವಿಷಯ ನಿರ್ವಾಹಕರಿಗೆ.
10. ಹೆಚ್ಚುವರಿ ಪ್ರತಿಗಳು.

18/01/2024

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಪರವಾಗಿ

**ಕರ್ನಾಟಕ ಸರ್ಕಾರ**

**ಸಂಖ್ಯೆ:** ನಅಇ 93 ಎಂಡಬ್ಲ್ಯೂಪಿ 2023 (ಭಾ-1)

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ: 28.08.2024

## ಸುತ್ತೋಲೆ

**ವಿಷಯ:** ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ಅನ್ನು ಉಲ್ಲಂಘಿಸಿ ಗ್ರಾಮ ಪಂಚಾಯಿತಿಗಳಿಂದ / ಸ್ಥಳೀಯ ಸಂಸ್ಥೆಗಳಿಂದ ವಿನ್ಯಾಸ ಅನುಮೋದಿಸುತ್ತಿರುವುದನ್ನು ತಡೆಗಟ್ಟುವ ಬಗ್ಗೆ.

**ಉಲ್ಲೇಖ:**
1. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಇವರ ಸುತ್ತೋಲೆ ಸಂಖ್ಯೆ: ನಗ್ರಾಯೋನಿ/ ಪರವಾನಿಗೆ/ ಸುತ್ತೋಲೆ/ 2015-16, ದಿನಾಂಕ: 22.01.2016.
2. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಇವರ ಸುತ್ತೋಲೆ ಸಂ. ನಗ್ರಾಯೋನಿ/ ಪರವಾನಿಗೆ/ ಸುತ್ತೋಲೆ 2015-16, ದಿನಾಂಕ: 04.05.2017.
3. ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 07 ಟಿಟಿಪಿ 2017, ದಿನಾಂಕ: 22.03.2017
4. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ಇವರ ಸುತ್ತೋಲೆ ಸಂಖ್ಯೆ: 23350 ಡಿಎಂಎ 121 ಜಿಪಿಎಸ್ 2017-18, ದಿನಾಂಕ: 05.01.2018.

**********

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಸುತ್ತೋಲೆಯಲ್ಲಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯನ್ವಯ ನಗರ / ಪಟ್ಟಣಗಳಿಗೆ ಪ್ರಾಧಿಕಾರ ರಚನೆಯ ಪೂರ್ವದಲ್ಲಿ ಹಾಗೂ ರಚನೆ ನಂತರ ಭೂ ಪರಿವರ್ತನೆಯಾದ ಜಮೀನುಗಳಿಗೆ ಸಂಬಂಧಪಟ್ಟ ಪ್ರಾಧಿಕಾರಗಳಿಂದ ವಿನ್ಯಾಸ ನಕ್ಷೆ ಅನುಮೋದನೆ ಪಡೆಯದೇ ಅನಧಿಕೃತವಾಗಿ ವಿಭಜಿಸಿ, ಸ್ಥಳೀಯ ಸಂಸ್ಥೆಯಲ್ಲಿ ಖಾತೆ ತೆರೆದಿರುವ ನಿವೇಶನಗಳಿಗೆ ಕಟ್ಟಡ ನಿರ್ಮಾಣ ಮಾಡುವ ಸಂಬಂಧ ತಾಂತ್ರಿಕ ಅಭಿಪ್ರಾಯ ನೀಡಬಾರದೆಂದು ನಿರ್ದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರ ಸುತ್ತೋಲೆಯಲ್ಲಿ, ಗ್ರಾಮ ಠಾಣಾ ವ್ಯಾಪ್ತಿಯಲ್ಲಿನ ನಿವೇಶನಗಳಿಗೆ ಹಾಗೂ ಕರ್ನಾಟಕ ಪೌರ ಕಾಯ್ದೆ, 1964 ರ ಕಲಂ 387 ದಿನಾಂಕ:08.12.1976 ರಿಂದ ಜಾರಿಯಲ್ಲಿದ್ದು, ಸದರಿ ದಿನಾಂಕ:08.12.1976 ರ ಪೂರ್ವದಲ್ಲಿ ಭೂ ಪರಿವರ್ತನೆಯಾದ ಜಮೀನುಗಳಲ್ಲಿ ಸ್ಥಳೀಯ ಸಂಸ್ಥೆಯಲ್ಲಿ ಖಾತೆ ತೆರೆದಿರುವ ನಿವೇಶನಗಳಿಗೆ ಕಟ್ಟಡ ಪರವಾನಗಿ ನೀಡುವ ಸಂಬಂಧ ತಾಂತ್ರಿಕ ಅಭಿಪ್ರಾಯ ನೀಡಬಹುದಾಗಿದೆ ಎಂದು ಹಾಗೂ ದಿನಾಂಕ: 08.12.1976 ರ ಪೂರ್ವದಲ್ಲಿ ಭೂ ಪರಿವರ್ತನೆಯಾಗದ ನಿವೇಶನಗಳಿಗೆ ಸ್ಥಳೀಯ ಸಂಸ್ಥೆಯಲ್ಲಿ ಖಾತೆ ತೆರೆದಿದ್ದರೆ, ನಿಯಮಾನುಸಾರ ಭೂ ಪರಿವರ್ತನೆ ಆದೇಶವನ್ನು ಕಂದಾಯ ಇಲಾಖೆಯಿಂದ

ಪಡೆದುಕೊಂಡ ನಂತರ ಅಂತಹ ನಿವೇಶನಗಳಿಗೆ ಕಟ್ಟಡ ಪರವಾನಗಿ ನೀಡಲು ತಾಂತ್ರಿಕ ಅಭಿಪ್ರಾಯ ನೀಡಬಹುದಾಗಿ ತಿಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ದಿನಾಂಕ: 22.03.2017 ರ ಸರ್ಕಾರದ ಸುತ್ತೋಲೆಯಲ್ಲಿ, ಸಕ್ಷಮ ಪ್ರಾಧಿಕಾರಗಳಿಂದ ವಿನ್ಯಾಸ ಅನುಮೋದನೆ ಪಡೆಯದೇ ಇರುವ ನಿವೇಶನಗಳಿಗೆ ಖಾತೆಯನ್ನು ನೀಡಬಾರದೆಂದು ಕಟ್ಟು ನಿಟ್ಟಿನ ಸೂಚನೆ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ದಿನಾಂಕ: 05.01.2018ರ ಸುತ್ತೋಲೆಯಲ್ಲಿ, ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯರವರು ರಾಜ್ಯದ ನಗರ ಸ್ಥಳಿಯ ಸಂಸ್ಥೆಗಳಲ್ಲಿನ ನಿಯಮ ಬಾಹಿರ ಖಾತಾ ವರ್ಗಾವಣೆಗಳನ್ನು ಗುರುತಿಸಿ, ನಿಯಮಾನುಸಾರ ರದ್ದುಪಡಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಗಿರುತ್ತದೆ.

ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾದ ರಿಟ್ ಅರ್ಜಿ ಸಂಖ್ಯೆ: 19033/2023 ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 15.11.2023 ರಂದು ನೀಡಿರುವ ದೈನಂದಿನ ಆದೇಶದಲ್ಲಿ, ಯೋಜನಾ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಗ್ರಾಮ ಪಂಚಾಯಿತಿಯಿಂದ ವಿನ್ಯಾಸ ಮಂಜೂರಾಗಿದ್ದು, ಇದು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17ಕ್ಕೆ ವ್ಯತಿರಿಕ್ತವಾಗಿರುತ್ತದೆ. ಈ ಅನುಮೋದನೆಯ ವಿರುದ್ಧ ದೂರು ಸ್ವೀಕರಿಸಿದ ಹಿನ್ನೆಲೆಯಲ್ಲಿ ವಿನ್ಯಾಸ ನಕ್ಷೆ ಮತ್ತು ಖಾತೆಗಳನ್ನು ರದ್ದುಗೊಳಿಸಿ ಆದೇಶಿಸಲಾಗಿರುತ್ತದೆ. ಇದು, ಮೂರನೇ ವ್ಯಕ್ತಿಯ / ಖರೀದಿದಾರರ ಹಿತಾಸಕ್ತಿಗಳನ್ನು ಒಳಗೊಂಡಿದ್ದು, ಅನಾವಶ್ಯಕ ವಿವಾದಗಳಿಗೆ ಕಾರಣವಾಗುವುದರಿಂದ, ಇಂತಹ ಸಮಸ್ಯೆಗಳನ್ನು ನಿಯಂತ್ರಿಸಲು ಒಂದು ರೂಪರೇಷೆ ರಚಿಸಲು ಮಾನ್ಯ ಉಚ್ಚ ನ್ಯಾಯಾಲಯವು ಸೂಚಿಸಿರುತ್ತದೆ. ಮುಂದುವರೆದು, ಉಚ್ಚ ನ್ಯಾಯಾಲಯವು ಈ ರೀತಿಯ ಸನ್ನಿವೇಶಗಳನ್ನು ಭವಿಷ್ಯದಲ್ಲಿ ತಡೆಗಟ್ಟುವ ಬಗ್ಗೆ ವಿವರಣೆ ಕೋರಿರುತ್ತದೆ.

ಆದುದರಿಂದ, ನಗರ ಸ್ಥಳೀಯ ಸಂಸ್ಥೆಗಳು/ ಗ್ರಾಮ ಪಂಚಾಯಿತಿಗಳು ವಿನ್ಯಾಸಗಳಿಗೆ ಅನುಮೋದನೆ ನೀಡುವ ಪೂರ್ವದಲ್ಲಿ ಯೋಜನಾ ಪ್ರಾಧಿಕಾರಗಳಿಂದ / ನಗರಾಭಿವೃದ್ಧಿ ಪ್ರಾಧಿಕಾರಗಳಿಂದ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯಡಿಯಲ್ಲಿ ವಿನ್ಯಾಸ ಅನುಮೋದನೆ ಪಡೆದು ಕ್ರಮ ವಹಿಸುವ ಸಂಬಂಧ ಈ ಕೆಳಕಂಡಂತೆ ನಿರ್ದೇಶನ ನೀಡಲಾಗಿರುತ್ತದೆ:

i. **ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4(ಎ) ರಡಿ ಘೋಷಿಸಲಾದ ಸ್ಥಳೀಯ ಯೋಜನಾ ಪ್ರದೇಶದೊಳಗೆ ಕಲಂ 17 ರಡಿಯಲಿ ಪ್ರಾಧಿಕಾರಗಳು ವಿನ್ಯಾಸ ಅನುಮೋದನೆ ಹಾಗೂ ಅಭಿವೃದ್ಧಿ ಕುರಿತು ಅನುಸರಿಸತಕ್ಕ ವಿಧಾನ:**

**a) ವಿನ್ಯಾಸ ಅನುಮೋದನೆ:**

i. ಭೂ ಮಾಲೀಕರು, ಕರ್ನಾಟಕ ಭೂ ಕಂದಾಯ ಕಾಯ್ದೆಯಡಿಯಲ್ಲಿ ಭೂ ಪರಿವರ್ತನೆ ಆದೇಶವನ್ನು ಪಡೆಯತಕ್ಕದ್ದು.

ii. ಭೂ ಮಾಲೀಕರು ಭೂ ಪರಿವರ್ತಿತ ಜಮೀನಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17(1) ರಡಿ ವಿನ್ಯಾಸ ಅನುಮೋದನೆ ಕೋರಿ ಅರ್ಜಿಯನ್ನು, ಯೋಜನಾ ಪ್ರಾಧಿಕಾರ/ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.

iii. ಯೋಜನಾ ಪ್ರಾಧಿಕಾರ/ ನಗರಾಭಿವೃದ್ಧಿ ಪ್ರಾಧಿಕಾರವು ಅನುಮೋದಿತ ಮಹಾಯೋಜನೆ ಹಾಗೂ ವಲಯ ನಿಯಮಾವಳಿಗಳಂತೆ ಪರಿಗಣಿಸಿ ವಿನ್ಯಾಸವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿದ ನಂತರ ವಿನ್ಯಾಸದಲ್ಲಿನ ನಿವೇಶನಗಳನ್ನು ಬಿಡುಗಡೆಗೊಳಿಸುವ ಷರತ್ತಿಗೊಳಪಟ್ಟು, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17(2-A) ರಂತೆ ತಾತ್ಕಾಲಿಕ ವಿನ್ಯಾಸಕ್ಕೆ ಅನುಮೋದನೆ ನೀಡಿ, ಒಂದು ಪ್ರತಿಯನ್ನು ಸಂಬಂಧಿತ ಸ್ಥಳೀಯ ಸಂಸ್ಥೆಯ ಮುಂದಿನ ಕ್ರಮಕ್ಕಾಗಿ ಕಳುಹಿಸತಕ್ಕದ್ದು, ಹಾಗೂ ವಿನ್ಯಾಸಕ್ಕೆ ಕಾಯ್ದೆಯ ಕಲಂ 17(2-B) ರಂತೆ ಪ್ರಾಧಿಕಾರದಿಂದ ಅಂತಿಮ ಅನುಮೋದನೆ ಪಡೆಯದೇ ವಿನ್ಯಾಸದಲ್ಲಿನ ಯಾವುದೇ ನಿವೇಶನಗಳಿಗೆ ಕಲಂ 17(2-E) ರಂತೆ ಖಾತೆ ತೆರೆಯದಂತೆ ಸ್ಥಳೀಯ ಸಂಸ್ಥೆಗೆ ಸೂಚಿಸುವುದು.

iv. ಪರ್ಯಾಯವಾಗಿ ಅರ್ಜಿದಾರರ ಕೋರಿಕೆ ಮೇರೆಗೆ, ಕಲಂ 17(2-C) ರಲ್ಲಿನ ಅವಕಾಶದಂತೆ 40:60 ಅನುಪಾತದಲ್ಲಿ, ಎರಡು ಹಂತದಲ್ಲಿ ವಿನ್ಯಾಸದಲ್ಲಿನ ನಿವೇಶನ ಬಿಡುಗಡೆ ಕುರಿತು ಕಾಯ್ದೆಯನ್ವಯ ಕ್ರಮ ವಹಿಸಿ, ವಿನ್ಯಾಸದಲ್ಲಿನ ಮೊದಲನೇಯ ಹಂತದ ಶೇ.40 ರಷ್ಟು ನಿವೇಶನಗಳನ್ನು ಬಿಡುಗಡೆಗೊಳಿಸಿ ತಾತ್ಕಾಲಿಕ ವಿನ್ಯಾಸಕ್ಕೆ ಅನುಮೋದನೆ ನೀಡಿ ಒಂದು ಪ್ರತಿಯನ್ನು ಸಂಬಂಧಿತ ಸ್ಥಳೀಯ ಸಂಸ್ಥೆಯ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಬಿಡುಗಡೆಗೊಳಿಸಿದ ನಿವೇಶನಗಳಿಗೆ ಮಾತ್ರ ಕಲಂ 17(2-E) ರಂತೆ ಖಾತೆಯನ್ನು ನೋಂದಣಿಗಾಗಿ ನೀಡಲು ಸೂಚಿಸುವುದು.

**b) ವಿನ್ಯಾಸದ ಅಭಿವೃದ್ಧಿ ಹಾಗೂ ನಿವೇಶನ ಬಿಡುಗಡೆ:**

i. ಯೋಜನಾ ಪ್ರಾಧಿಕಾರವು/ ನಗರಾಭಿವೃದ್ಧಿ ಪ್ರಾಧಿಕಾರವು, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17(2-A) ರಂತೆ ತಾತ್ಕಾಲಿಕ ಅನುಮೋದನೆ ನೀಡಿದ ವಿನ್ಯಾಸವನ್ನು ಕಲಂ 17(2-B) ರಡಿ ವಿನ್ಯಾಸದ ಅಭಿವೃದ್ಧಿ ಕಾರ್ಯವನ್ನು ಸಂಬಂಧಿತ ಸಕ್ಷಮ ಪ್ರಾಧಿಕಾರದ ಮೇಲ್ವಿಚಾರಣೆಯಲ್ಲಿ ಕೈಗೊಳ್ಳತಕ್ಕದ್ದು. ಕಾಯ್ದೆಯ ಕಲಂ 17(2-D) ರನ್ವಯ ನಿಗಧಿತ ಅವಧಿಯಲ್ಲಿ ಮೂಲಭೂತ ಸೌಕರ್ಯಗಳೊಂದಿಗೆ ಎಲ್ಲಾ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ, ಖಚಿತಪಡಿಸಿಕೊಂಡು, ಕೆಳಕಂಡ ಕೋಷ್ಟಕದಲ್ಲಿ ತಿಳಿಸಿರುವಂತೆ ಸಕ್ಷಮ ಪ್ರಾಧಿಕಾರಗಳಿಂದ ಕಾಮಗಾರಿಗಳು ಪೂರ್ಣಗೊಂಡಿರುವ ಬಗ್ಗೆ ಪ್ರಮಾಣ ಪತ್ರ ಪಡೆದು, ಅಭಿವೃದ್ಧಿಪಡಿಸಿರುವ ರಸ್ತೆ, ಉದ್ಯಾನವನ / ಆಟದ ಮೈದಾನವನ್ನು ಸಂಬಂಧಿತ ನಗರ ಸ್ಥಳೀಯ ಸಂಸ್ಥೆಗೆ ಮತ್ತು ನಾಗರೀಕ ಸೌಲಭ್ಯ ನಿವೇಶನವನ್ನು ಯೋಜನಾ ಪ್ರಾಧಿಕಾರಕ್ಕೆ ಹಸ್ತಾಂತರಿಸಿದ ನಂತರ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17(2-B) ರಂತೆ, ವಿನ್ಯಾಸಕ್ಕೆ ಅಂತಿಮ ಅನುಮೋದನೆ ನೀಡಿ, ವಿನ್ಯಾಸದಲ್ಲಿನ ಶೇ.100 ರಷ್ಟು ನಿವೇಶನಗಳನ್ನು ನೋಂದಣಿಗಾಗಿ ಬಿಡುಗಡೆಗೊಳಿಸತಕ್ಕದ್ದು.

**ಸಕ್ಷಮ ಪ್ರಾಧಿಕಾರ**

| ಕಾಮಗಾರಿ | ಸಕ್ಷಮ ಪ್ರಾಧಿಕಾರ |
|---|---|
| ರಸ್ತೆ ಕಾಮಗಾರಿ | i. ನಗರ ಪ್ರದೇಶಗಳಲ್ಲಿ ಸಂಬಂಧಿತ ನಗರ ಸ್ಥಳೀಯ ಸಂಸ್ಥೆ<br>ii. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ |
| ನೀರು ಸರಬರಾಜು/ಒಳಚರಂಡಿ | i. ಬೆಂಗಳೂರು ವ್ಯಾಪ್ತಿಯಲ್ಲಿ ಬೆಂಗಳೂರು ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ<br>ii. ಉಳಿದ ನಗರ ಪ್ರದೇಶಗಳಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ<br>iii. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲೀಕರಣ ವಿಭಾಗ |
| ವಿದ್ಯುತ್ ಕಾಮಗಾರಿ | ಸಂಬಂಧಿತ ವಿದ್ಯುಚ್ಛಕ್ತಿ ಸರಬರಾಜು ಕಂಪನಿ (ESCOM) |

ii. ಎರಡು ಹಂತಗಳಲ್ಲಿ ನಿವೇಶನ ಬಿಡುಗಡೆ ಕೋರಿರುವ ಪ್ರಕರಣಗಳಲ್ಲಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17(2-C) ರಂತೆ, ತಾತ್ಕಾಲಿಕ ವಿನ್ಯಾಸ ಅನುಮೋದನೆ ದಿನಾಂಕದಿಂದ 3 ವರ್ಷಗಳೊಳಗಾಗಿ ಅಥವಾ ದಾಖಲಿಸಿದ ಕಾರಣಗಳಿಂದ ಒಂದು ವರ್ಷ ಹೆಚ್ಚುವರಿ ಅವಧಿಯಲ್ಲಿ, ವಿನ್ಯಾಸದ ಮೂಲಭೂತ ಸೌಕರ್ಯಗಳೊಂದಿಗೆ ಎಲ್ಲಾ ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡಿರುವ ಬಗ್ಗೆ, ಯೋಜನಾ ಪ್ರಾಧಿಕಾರಗಳು/ ನಗರಾಭಿವೃದ್ಧಿ ಪ್ರಾಧಿಕಾರಗಳು ಖಚಿತ ಪಡಿಸಿಕೊಳ್ಳತಕ್ಕದ್ದು. ನಿಗಧಿಪಡಿಸಿದ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರಗಳಿಂದ ಕಾಮಗಾರಿಗಳು ಪೂರ್ಣಗೊಂಡಿರುವ ಬಗ್ಗೆ ಮುಕ್ತಾಯ ಪ್ರಮಾಣ ಪತ್ರ ಪಡೆದು, ಅಭಿವೃದ್ಧಿಪಡಿಸಿರುವ ರಸ್ತೆ, ಉದ್ಯಾನವನ / ಆಟದ ಮೈದಾನವನ್ನು ಸ್ಥಳೀಯ ಸಂಸ್ಥೆಗೆ ಮತ್ತು ನಾಗರೀಕ ಸೌಲಭ್ಯವನ್ನು ಯೋಜನಾ ಪ್ರಾಧಿಕಾರಕ್ಕೆ ಹಸ್ತಾಂತರಿಸಿದ ನಂತರ ಅಂತಿಮ ವಿನ್ಯಾಸಕ್ಕೆ ಅನುಮೋದನೆ ನೀಡಿ ವಿನ್ಯಾಸದಲ್ಲಿನ ಬಾಕಿ ಉಳಿದ ಎರಡನೆಯ ಹಂತದ ಶೇ.60 ರಷ್ಟು ನಿವೇಶನಗಳನ್ನು ನೋಂದಣಿಗಾಗಿ ಬಿಡುಗಡೆಗೊಳಿಸತಕ್ಕದ್ದು.

iii. ಎರಡು ಹಂತಗಳಲ್ಲಿ ನಿವೇಶನ ಬಿಡುಗಡೆಗೆ ಕೋರಿರುವ ಪ್ರಕರಣಗಳಲ್ಲಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17(2-C) ರಂತೆ ವಿನ್ಯಾಸವನ್ನು ನಿಗಧಿತ ಅವಧಿಯಲ್ಲಿ ಅಭಿವೃದ್ಧಿಪಡಿಸದೇ ಇದ್ದಲ್ಲಿ, ಯೋಜನಾ ಪ್ರಾಧಿಕಾರಕ್ಕೆ ಅಭಿವೃದ್ಧಿದಾರರು / ಅರ್ಜಿದಾರಿಂದ ಅಡಮಾನ ಪಡೆದಿರುವ ಮೂಲೆ ನಿವೇಶನಗಳನ್ನು ಮುಟ್ಟುಗೋಲು ಹಾಕಿಕೊಳ್ಳತಕ್ಕದ್ದು.

ಇ) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17(2-E) ರಂತೆ ಸಂಬಂಧಿತ ಸ್ಥಳೀಯ ಸಂಸ್ಥೆಯು, ಅನುಮೋದನೆ ನೀಡಿರುವ ವಿನ್ಯಾಸದಲ್ಲಿ ಕರ್ನಾಟಕ

ಪೌರಸಭೆಗಳ ಕಾಯ್ದೆ, 1964, ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ಸ್ ಕಾಯ್ದೆ, 1976, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ, 1993 ಅಥವಾ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕಾಯ್ದೆ, 2020ರ ಅಡಿಯಲ್ಲಿ ಯಾವುದೇ ಖಾತೆಯನ್ನು ನೀಡತಕ್ಕದ್ದಲ್ಲ.

**d) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17ರ ಉಲ್ಲಂಘನೆ ಕುರಿತು ಕ್ರಮ:**

ಸ್ಥಳೀಯ ಯೋಜನಾ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17 ರಂತೆ ವಿನ್ಯಾಸ ಅನುಮೋದನೆ ಪಡೆಯದೇ ಭೂ ಅಭಿವೃದ್ಧಿ ಕೈಗೊಂಡಿರುವ ಪ್ರಕರಣಗಳಿಗೆ ಅಥವಾ ಕಾಯ್ದೆ / ನಿಯಮಗಳಿಗೆ / ವಲಯ ನಿಯಮಾವಳಿಗಳ ಅವಕಾಶಗಳಿಗೆ ವ್ಯತಿರಿಕ್ತವಾಗಿ ವಿನ್ಯಾಸದ ಅಭಿವೃದ್ಧಿ ಕೈಗೊಂಡಲ್ಲಿ, ಯೋಜನಾ ಪ್ರಾಧಿಕಾರಗಳು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17(4) ರಂತೆ ನಿಯಮಾನುಸಾರ ಅಭಿವೃದ್ಧಿದಾರರು / ಅರ್ಜಿದಾರರಿಗೆ ನೋಟಿಸ್ ಜಾರಿಗೊಳಿಸಿ ಉಲ್ಲಂಘನೆಗಳನ್ನು ತೆರವುಗೊಳಿಸಲು ನಿಯಮಾನುಸಾರ ಕ್ರಮ ಜರುಗಿಸುವುದು.

ಸ್ಥಳೀಯ ಯೋಜನಾ ಪ್ರದೇಶದಲ್ಲಿನ ಗ್ರಾಮ ಪಂಚಾಯಿತಿಯು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 17ನ್ನು ಉಲ್ಲಂಘಿಸಿ ಅನುಮೋದನೆಗಳನ್ನು ನೀಡಿದಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ, 1993 ರ ಕಲಂ 64 (5-A) ರನ್ವಯ ಉಲ್ಲಂಘನೆಯ ಬಗ್ಗೆ ನಿಯಮಾನುಸಾರ ಕ್ರಮ ಜರುಗಿಸಲು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ ಸಂಬಂಧಿತ ಸಕ್ಷಮ ಪ್ರಾಧಿಕಾರಕ್ಕೆ ದೂರು / ವರದಿಯನ್ನು ಯೋಜನಾ ಪ್ರಾಧಿಕಾರಗಳು / ನಗರಾಭಿವೃದ್ಧಿ ಪ್ರಾಧಿಕಾರಗಳು ಕ್ರಮ ವಹಿಸತಕ್ಕದ್ದು.

**II. <u>ಸ್ಥಳೀಯ ಯೋಜನಾ ಪ್ರದೇಶದ ಹೊರ ಭಾಗದಲ್ಲಿರುವ (outside LPA within the jurisdiction of Municipalities) ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 4-ಕೆ ರಂತೆ ವಿನ್ಯಾಸಕ್ಕೆ ತಾಂತ್ರಿಕ ಅನುಮೋದನೆ ಕುರಿತು ಅನುಸರಿಸತಕ್ಕ ವಿಧಾನ:</u>**

**ವಿನ್ಯಾಸ ಅನುಮೋದನೆ, ಅಭಿವೃದ್ಧಿ ಹಾಗೂ ನಿವೇಶನ ಬಿಡುಗಡೆ:**

i. ಭೂ ಮಾಲೀಕರು, ಕರ್ನಾಟಕ ಭೂ ಕಂದಾಯ ಕಾಯ್ದೆಯಡಿಯಲ್ಲಿ ಭೂ ಪರಿವರ್ತನೆ ಆದೇಶವನ್ನು ಪಡೆಯತಕ್ಕದ್ದು.

ii. ಭೂ ಪರಿವರ್ತನೆ ಆದೇಶದಂತೆ ಸಂಪೂರ್ಣ ವಿಸ್ತೀರ್ಣಕ್ಕೆ ವಿನ್ಯಾಸ ಅನುಮೋದನೆಗಾಗಿ ನಗರ ಸ್ಥಳೀಯ ಸಂಸ್ಥೆಗೆ (ನಗರಸಭೆ / ಪುರಸಭೆ / ಪಟ್ಟಣ ಪಂಚಾಯಿತಿಯು) ಕಾಯ್ದೆಯ ಕಲಂ 4-K(1) ರಂತೆ ಅರ್ಜಿ ಸಲ್ಲಿಸತಕ್ಕದ್ದು.

iii. ಸಂಬಂಧಿತ ನಗರಸಭೆ / ಪುರಸಭೆ / ಪಟ್ಟಣ ಪಂಚಾಯಿತಿಯು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರಕಲಂ 4-K(2) ರಡಿ ವಿನ್ಯಾಸಕ್ಕೆ ತಾಂತ್ರಿಕ ಅನುಮೋದನೆ ಕುರಿತು ಜಿಲ್ಲೆಯ ಸಂಬಂಧಪಟ್ಟ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರಿಗೆ ಪ್ರಸ್ತಾವನೆಯನ್ನು ಸಲ್ಲಿಸತಕ್ಕದ್ದು.

iv. ಸ್ಥಳೀಯ ಸಂಸ್ಥೆಯು ಈ ರೀತಿ ತಾಂತ್ರಿಕ ಅನುಮೋದನೆಗಾಗಿ ರವಾನಿಸಿದ ವಿನ್ಯಾಸ ಪ್ರಸ್ತಾವನೆಯ ಕುರಿತು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು ಅಥವಾ ಅಧೀಕರಿಸಿದ/ ಅಧಿಕಾರ ಪ್ರತ್ಯಾಯೋಜಿಸಿರುವ ಅಧಿಕಾರಿಯು (not below the rank of Assistant Director) ತಾಂತ್ರಿಕ ಅನುಮೋದನೆಯನ್ನು ನೀಡಿ ಸ್ಥಳೀಯ ಸಂಸ್ಥೆಗೆ ಮುಂದಿನ ಕ್ರಮಕ್ಕಾಗಿ ಕಳುಹಿಸತಕ್ಕದ್ದು.

v. ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು ಸಲ್ಲಿಸಿರುವ ಅನುಮೋದಿತ ವಿನ್ಯಾಸವನ್ನು ಅಭಿವೃದ್ಧಿಪಡಿಸಲು ಸಂಬಂಧಿತ ಸ್ಥಳೀಯ ಸಂಸ್ಥೆಯು ಚಾಲ್ತಿ ಕಾಯ್ದೆ / ನಿಯಮ / ಸುತ್ತೋಲೆಗಳಂತೆ ಕ್ರಮ ಜರುಗಿಸಿ ವಿನ್ಯಾಸದ ಅಭಿವೃದ್ಧಿ ಕಾಮಗಾರಿಗಳನ್ನು ಕೆಳಕಂಡ ಸಕ್ಷಮ ಪ್ರಾಧಿಕಾರಗಳ ಮೇಲ್ವಿಚಾರಣೆಯಲ್ಲಿ ಕೈಗೊಂಡು ನಿಯಮಾನುಸಾರ ನಿವೇಶನಗಳನ್ನು ಬಿಡುಗಡೆಗೊಳಿಸತಕ್ಕದ್ದು.

**ಸಕ್ಷಮ ಪ್ರಾಧಿಕಾರ**

| **ಕಾಮಗಾರಿ** | **ಸಕ್ಷಮ ಪ್ರಾಧಿಕಾರ** |
|---|---|
| ರಸ್ತೆ ಕಾಮಗಾರಿ | ಸಂಬಂಧಿತ ನಗರ ಸ್ಥಳೀಯ ಸಂಸ್ಥೆ |
| ನೀರು ಸರಬರಾಜು/ ಒಳಚರಂಡಿ | i. ಬೆಂಗಳೂರು ವ್ಯಾಪ್ತಿಯಲ್ಲಿ ಬೆಂಗಳೂರು ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ<br>ii. ಉಳಿದ ನಗರ ಪ್ರದೇಶಗಳಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ |
| ವಿದ್ಯುತ್ ಕಾಮಗಾರಿ | ಸಂಬಂಧಿತ ವಿದ್ಯುಚ್ಛಕ್ತಿ ಸರಬರಾಜು ಕಂಪನಿ (ESCOM) |

~~vi. ವಿನ್ಯಾಸ ಅಭಿವೃದ್ಧಿ ಕಾರ್ಯ ಪೂರ್ಣಗೊಂಡ ನಂತರವೇ ವಿನ್ಯಾಸದ ನಿವೇಶನಗಳಿಗೆ~~ ನಗರಸಭೆ/ ಪುರಸಭೆ/ ಪಟ್ಟಣ ಪಂಚಾಯಿತಿಯು ಖಾತೆ ನೀಡತಕ್ಕದ್ದು.

## III. ಸ್ಥಳೀಯ ಯೋಜನಾ ಪ್ರದೇಶದ ಹೊರಭಾಗದಲ್ಲಿರುವ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ (Outside LPA within the jurisdiction of Rural Local Body) ವಿನ್ಯಾಸ ಅನುಮೋದನೆಗೆ ಅನುಸರಿಸತಕ್ಕ ವಿಧಾನ:

**ವಿನ್ಯಾಸ ಅನುಮೋದನೆ, ಅಭಿವೃದ್ಧಿ ಹಾಗೂ ನಿವೇಶನ ಬಿಡುಗಡೆ:**

i. ಭೂಮಾಲೀಕರು, ಕರ್ನಾಟಕ ಭೂ ಕಂದಾಯ ಕಾಯ್ದೆಯಡಿಯಲ್ಲಿ ಭೂಪರಿವರ್ತನೆ ಆದೇಶವನ್ನು ಪಡೆಯತಕ್ಕದ್ದು.

ii. ಭೂ ಮಾಲೀಕರು, ಭೂ ಪರಿವರ್ತನೆ ಆದೇಶದಂತೆ ಸಂಪೂರ್ಣ ವಿಸ್ತೀರ್ಣಕ್ಕೆ ವಿನ್ಯಾಸ ಅನುಮೋದನೆಗಾಗಿ ಕಾಯ್ದೆಯ ಕಲಂ 4-K(1) ರಂತೆ ಸಂಬಂಧಿತ ಗ್ರಾಮ ಪಂಚಾಯಿತಿಗೆ ಅರ್ಜಿ ಸಲ್ಲಿಸತಕ್ಕದ್ದು.

iii. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 4-K ರಡಿಯಲ್ಲಿ ಒಂದು ಎಕರೆಗಿಂತ ಕಡಿಮೆ ವಿಸ್ತೀರ್ಣದ ಜಮೀನನ್ನು ಒಳಗೊಂಡಂತೆ ಎಲ್ಲಾ ಜಮೀನುಗಳಿಗೆ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರಿಂದ ಅಥವಾ ಅಧೀಕರಿಸಿರುವ ಅಧಿಕಾರಿಯಿಂದ ವಿನ್ಯಾಸಕ್ಕೆ ತಾಂತ್ರಿಕ ಅನುಮೋದನೆಯನ್ನು ಪಡೆಯಲು ಗ್ರಾಮ ಪಂಚಾಯಿತಿಯು ಪ್ರಸ್ತಾವನೆಗಳನ್ನು ಕಾಯ್ದೆಯ ಕಲಂ 4-K(2) ರಡಿ ಸಂಬಂಧಿತ ಜಿಲ್ಲೆಯ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರಿಗೆ ಸಲ್ಲಿಸತಕ್ಕದ್ದು.

iv. ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು ಯೋಜನಾ ತತ್ವಗಳಿಗನುಗುಣವಾಗಿ ಪರಿಶೀಲಿಸಿ **ಸ್ಥಳೀಯ ಯೋಜನಾ ಪ್ರದೇಶದಲ್ಲಿ ಒಳಪಡದೇ ಇರುವ ನಗರ ಸ್ಥಳೀಯ ಸಂಸ್ಥೆಗಳಿಗೆ ಅನುಸರಿಸುವ ಮಾನದಂಡಗಳಂತೆ** ವಿನ್ಯಾಸಕ್ಕೆ ತಾಂತ್ರಿಕ ಅನುಮೋದನೆ ನೀಡಿ, ಸ್ಥಳೀಯ ಸಂಸ್ಥೆಗೆ ಕಳುಹಿಸತಕ್ಕದ್ದು.

v. ಸ್ಥಳೀಯ ಸಂಸ್ಥೆಯು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ತಾಂತ್ರಿಕ ಅನುಮೋದನೆ ನೀಡಿದ ವಿನ್ಯಾಸಕ್ಕೆ ಅನುಮೋದನೆ ನೀಡುವ ಬಗ್ಗೆ ಗ್ರಾಮ ಪಂಚಾಯಿತಿಯು ಸಾಮಾನ್ಯ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆಯುವುದು.

vi. ಬಹು ನಿವೇಶನ ವಸತಿ / ವಸತಿಯೇತರ ವಿನ್ಯಾಸಗಳಿಗೆ, ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ತಾಂತ್ರಿಕ ಅನುಮೋದನೆ ನೀಡಲಾದ ವಿನ್ಯಾಸ ನಕ್ಷೆಯ ಮೇಲೆ ವಿನ್ಯಾಸ ನಕ್ಷೆಯನ್ನು "ನೆಲದ ಮೇಲೆ ಅಳವಡಿಸಲು ಮಾತ್ರ (for demarcation purpose only)" ಎಂದು ಷರಾ ಬರೆದು ಅರ್ಜಿದಾರರಿಗೆ ವಿನ್ಯಾಸ ನಕ್ಷೆ ರೀತಿ ನೆಲದ ಮೇಲೆ ರಸ್ತೆ ಜಾಲ, ಉದ್ಯಾನವನ / ಆಟದ ಮೈದಾನ / ಬಯಲು ಪ್ರದೇಶ ಮತ್ತು ನಾಗರೀಕ ಸೌಲಭ್ಯಕ್ಕಾಗಿ ಕಾಯ್ದಿರಿಸಿರುವ ಪ್ರದೇಶಗಳನ್ನು ಮತ್ತು ನಿವೇಶನಗಳನ್ನು ಗುರುತಿಸಲು ತಿಳಿಸತಕ್ಕದ್ದು.

vii. ವಿನ್ಯಾಸ ನಕ್ಷೆಯನ್ನು ನೆಲದ ಮೇಲೆ ಅಳವಡಿಸಿ ಗುರುತಿಸಿದ ನಂತರ, ಅಭಿವೃದ್ಧಿ ಅಧಿಕಾರಿಯು ವಿನ್ಯಾಸದಲ್ಲಿ ಕಾಯ್ದಿರಿಸಿದ ಉದ್ಯಾನವನ / ಆಟದ ಮೈದಾನ / ಬಯಲು ಪ್ರದೇಶ ನಾಗರೀಕ ಸೌಲಭ್ಯದ ಪ್ರದೇಶ ಮತ್ತು ರಸ್ತೆ ಜಾಗಗಳನ್ನು ನೋಂದಾಯಿತ ಪರಿತ್ಯಜನಾ ಪತ್ರದ ಮೂಲಕ ಗ್ರಾಮ ಪಂಚಾಯಿತಿಗೆ ಹಸ್ತಾಂತರಿಸಿಕೊಳ್ಳತಕ್ಕದ್ದು.

viii. ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯು ತಾಂತ್ರಿಕವಾಗಿ ಅನುಮೋದನೆ ನೀಡಲಾದ ವಿನ್ಯಾಸ ನಕ್ಷೆಯಲ್ಲಿ ನೋಂದಾವಣೆಗಾಗಿ ಬಿಡುಗಡೆ ಮಾಡಬೇಕಾದ ಶೇ.60 ರಷ್ಟು ನಿವೇಶನಗಳನ್ನು ಚದುರಿದಂತೆ ಗುರುತಿಸತಕ್ಕದ್ದು.

ix. ತಾಲ್ಲೂಕು ಪಂಚಾಯಿತಿಯು ಕಾರ್ಯನಿರ್ವಹಣಾಧಿಕಾರಿಯ ವಿನ್ಯಾಸ ನಕ್ಷೆ ಮಂಜೂರಾತಿ ಆದೇಶ ಪತ್ರ, ನಕ್ಷೆಯ 3 ಪ್ರತಿಗಳು ಹಾಗೂ ಶೇ.60 ರಷ್ಟು ನಿವೇಶನಗಳನ್ನು ನೋಂದಾವಣೆಗಾಗಿ ಬಿಡುಗಡೆ ಮಾಡಿರುವ ಬಗ್ಗೆ ಪ್ರಮಾಣ

ಪತ್ರವನ್ನು ಅರ್ಜಿದಾರರಿಗೆ / ಅಭಿವೃದ್ಧಿದಾರರಿಗೆ ನೀಡತಕ್ಕದ್ದು ಹಾಗೂ ನಿವೇಶನಗಳನ್ನು ನೋಂದಾವಣೆಗಾಗಿ ಬಿಡುಗಡೆ ಮಾಡಿರುವ ಬಗ್ಗೆ ಸಂಬಂಧಪಟ್ಟ ಉಪ ನೋಂದಾವಣಾಧಿಕಾರಿಗಳ ಕಾರ್ಯಾಲಯಕ್ಕೆ ಅನುಮೋದಿತ ನಕ್ಷೆಯ ಪ್ರತಿಯೊಂದಿಗೆ ಕಳುಹಿಸತಕ್ಕದ್ದು.

x. ಸ್ಥಳೀಯ ಸಂಸ್ಥೆಯು ಸೂಚಿಸಿರುವಂತೆ ಅಭಿವೃದ್ಧಿ ಕಾಮಗಾರಿಗಳನ್ನು ನಿಗಧಿತ ಅವಧಿಯಲ್ಲಿ ಅರ್ಜಿದಾರರು / ಅಭಿವೃದ್ಧಿದಾರರು ಕೈಗೊಳ್ಳದೇ ಇದ್ದಲ್ಲಿ, ಉಳಿದಂತೆ ಶೇ.40 ರಷ್ಟು ನಿವೇಶನಗಳನ್ನು ಗ್ರಾಮ ಪಂಚಾಯಿತಿಯ ಹರಾಜಿನಲ್ಲಿ ಮಾರಾಟ ಮಾಡಿ ವಿನ್ಯಾಸ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳುವ ಬಗ್ಗೆ ಅಧಿಕಾರ ಇರುವ ಬಗ್ಗೆ ನೋಟರಿ ದೃಢೀಕೃತ ಮುಚ್ಚಳಿಕೆ ಪತ್ರವನ್ನು ಅರ್ಜಿದಾರರು / ಅಭಿವೃದ್ಧಿದಾರರಿಂದ ಗ್ರಾಮ ಪಂಚಾಯಿತಿಯು ಪಡೆಯತಕ್ಕದ್ದು.

xi. ಅರ್ಜಿದಾರರು/ ಅಭಿವೃದ್ಧಿದಾರರು ರಸ್ತೆ, ನೀರು ಸರಬರಾಜು, ಚರಂಡಿ, ಬೀದಿ ದೀಪಗಳ ವ್ಯವಸ್ಥೆ ಸೇರಿದಂತೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು/ ಅಭಿವೃದ್ಧಿಯನ್ನು ಈ ಕೆಳಕಂಡ ಸಕ್ಷಮ ಪ್ರಾಧಿಕಾರಗಳ ಮೇಲ್ವಿಚಾರಣೆಯಲ್ಲಿ ಕೈಗೊಂಡು, ಅವರಿಂದ ನಿರಾಕ್ಷೇಪಣಾ ಪತ್ರವನ್ನು ಪಡೆದು ಸಂಬಂಧಪಟ್ಟ ತಾಲ್ಲೂಕು ಪಂಚಾಯಿತಿಗೆ ನೀಡತಕ್ಕದ್ದು.

**<u>ಸಕ್ಷಮ ಪ್ರಾಧಿಕಾರ</u>**

| ಕಾಮಗಾರಿ | ಸಕ್ಷಮ ಪ್ರಾಧಿಕಾರ |
|---|---|
| ರಸ್ತೆ ಕಾಮಗಾರಿ | ಸಂಬಂಧಿತ ತಾಲ್ಲೂಕಿನ ಪಂಚಾಯತ್ ರಾಜ್ ಇಂಜಿನಿಯರಿಂಗ್ ನ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು |
| ನೀರು ಸರಬರಾಜು/ಒಳಚರಂಡಿ | ಸಂಬಂಧಿತ ತಾಲ್ಲೂಕಿನ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು |
| ವಿದ್ಯುತ್ ಕಾಮಗಾರಿ | ಸಂಬಂಧಿತ ತಾಲ್ಲೂಕಿನ ವಿದ್ಯುಚ್ಛಕ್ತಿ ಸರಬರಾಜು ಕಂಪನಿ (ESCOM) ನ ಉಪವಿಭಾಗದ ಕಾರ್ಯಪಾಲಕ ಅಭಿಯಂತರರು |

ಸ್ಥಳೀಯ ಯೋಜನಾ ಪ್ರದೇಶಕ್ಕೆ ಒಳಪಡದ ಕ್ಷೇತ್ರದಲ್ಲಿ ಗ್ರಾಮ ಪಂಚಾಯಿತಿಯು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 4-K ಉಲ್ಲಂಘಿಸಿ ಅನುಮೋದನೆಗಳನ್ನು ನೀಡದಂತೆ ಸೂಚಿಸಿದೆ.

(ಸತೀಶ್ ಕಬಾಡಿ) 28.8.2024
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ
(ಪೌರಾಡಳಿತ-2 ಮತ್ತು ಮಂಡಳಿ)

ಇವರಿಗೆ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

2. ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
3. ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
4. ಆಯುಕ್ತರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ವಿ.ವಿ ಗೋಪುರ, ಬೆಂಗಳೂರು.
6. ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಆಯುಕ್ತರು / ಪೌರಾಯುಕ್ತರು / ಮುಖ್ಯಾಧಿಕಾರಿಗಳು ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು (ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರ ಮುಖಾಂತರ).
9. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು, ಗ್ರಾಮೀಣ ಸ್ಥಳೀಯ ಸಂಸ್ಥೆಗಳು – (ಆಯುಕ್ತರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ರವರ ಮುಖಾಂತರ).
10. ಆಯುಕ್ತರು / ನಗರ ಯೋಜಕ ಸದಸ್ಯರು / ಸದಸ್ಯ ಕಾರ್ಯದರ್ಶಿಗಳು ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು / ಯೋಜನಾ ಪ್ರಾಧಿಕಾರಗಳು- (ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ರವರ ಮುಖಾಂತರ).
11. ಹೆಚ್ಚುವರಿ ನಿರ್ದೇಶಕರು / ಜಂಟಿ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ವಲಯ ಕಛೇರಿಗಳು ಮತ್ತು ಎಲ್ಲಾ ಸಹಾಯಕ ನಿರ್ದೇಶಕರು, ಶಾಖಾ ಕಛೇರಿಗಳು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ- (ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ರವರ ಮುಖಾಂತರ).
12. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
13. ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
14. ಕಛೇರಿ ಪ್ರತಿಗಳು.

1492

ಸಂಖ್ಯೆ: ನಗ್ರಾಯೋಇ:ಜಂನಿ:123:CIRC:2024-25
ಸರ್ಕಾರದ ಸುತ್ತೋಲೆ ಸಂಖ್ಯೆ:
ನಅಇ 93 ಎಂಎಬಿಆರ್‌ಪಿ 2023 (ಭಾಗ-1)
ದಿನಾಂಕ: 28-08-2024.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ,
ಬಹುಮಹಡಿಗಳ ಕಟ್ಟಡ, 4ನೇ ಹಂತ,
ಡಾ: ಅಂಬೇಡ್ಕರ್ ವೀದಿ, ಬೆಂಗಳೂರು.
ದಿನಾಂಕ: - 3 SEP 2024

ಯಥಾ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.

1. ನಗರ ಮತ್ತು ಗ್ರಾಮಾಂತರ ಯೋಜನಾ ಅಪರ ನಿರ್ದೇಶಕರು, ವಲಯ ಕಛೇರಿ, ಧಾರವಾಡ.
2. ನಗರ ಮತ್ತು ಗ್ರಾಮಾಂತರ ಯೋಜನಾ ಅಪರ ನಿರ್ದೇಶಕರು, ಕರ್ನಾಟಕ ರಾಜ್ಯ ನಗರ ಯೋಜನಾ ಮಂಡಳಿ, ಬೆಂಗಳೂರು.
3. ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಛೇರಿ, ಬೆಂಗಳೂರು/ಮೈಸೂರು/ ಕಲಬುರಗಿ.
4. ಆಯುಕ್ತರು, ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು.
5. ಸದಸ್ಯ ಕಾರ್ಯದರ್ಶಿಗಳು, ರಾಜ್ಯದ ಎಲ್ಲಾ ನಗರ ಯೋಜನಾ ಪ್ರಾಧಿಕಾರಗಳು.
6. ಎಲ್ಲಾ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಕಛೇರಿಗಳಿಗೆ.
7. ಮುಖ್ಯಾಧಿಕಾರಿಗಳು/ಪೌರಾಯುಕ್ತರು, ಪುರಸಭೆ/ನಗರಸಭೆ/ಪಟ್ಟಣ ಪಂಚಾಯತಿ ಯೋಜನಾ ಪ್ರಾಧಿಕಾರಗಳು.
8. ಕೇಂದ್ರ ಕಛೇರಿಯ ಎಲ್ಲಾ ತಾಂತ್ರಿಕ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ.
9. ಸದರಿ ಸುತ್ತೋಲೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು ಸಂಬಂಧಪಟ್ಟ ವಿಷಯ ನಿರ್ವಾಹಕರಿಗೆ.
10. ಹೆಚ್ಚುವರಿ ಪ್ರತಿಗಳು.



31/08/24

ನಗರ ಮತ್ತು ಗ್ರಾಮಾಂತರ ಯೋಜನಾ
ನಿರ್ದೇಶಕರ ಪರವಾಗಿ

42 NK(Madhuri)Circ

X to be mailed to ZP also

ಅನುಬಂಧ-2

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರಾವಳಿ ಭಾಗದಲ್ಲಿ 01 ಎಕರೆವರೆಗೆ ಏಕ ನಿವೇಶನ ವಿನ್ಯಾಸಗಳಿಗೆ ಅನುಮೋದನೆ ನೀಡುವ ಸಂಬಂಧ ಅಧಿಕಾರ ಪ್ರತ್ಯಾಯೋಜಿಸುವ ಬಗ್ಗೆ.

**ಓದಲಾಗಿದೆ:** ಕರಾವಳಿ ಭಾಗದಲ್ಲಿ ಬರುವ ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳಲ್ಲಿ ವಸತಿ ಮತ್ತು ವಾಣಿಜ್ಯ ಭೂಪರಿವರ್ತಿತ ಜಮೀನುಗಳ ಏಕ ನಿವೇಶನ ವಿನ್ಯಾಸಗಳಿಗೆ ಅನುಮೋದನೆ ನೀಡುವ ಸಮಸ್ಯೆಗಳ ಬಗ್ಗೆ ಚರ್ಚಿಸಲು ಸನ್ಮಾನ್ಯ ಸಭಾಧ್ಯಕ್ಷರ ಅಧ್ಯಕ್ಷತೆಯಲ್ಲಿ ದಿ: 25.07.2024 ರಂದು ಜರುಗಿದ ಸಭೆ.

9|8|2024

*****

**ಪ್ರಸ್ತಾವನೆ:**

ಕರಾವಳಿ ಭಾಗದ ಶಾಸಕರು ಈ ಹಿಂದೆ 25 ಸೆಂಟ್ಸ್ ವಿಸ್ತೀರ್ಣವರೆಗಿನ ಜಮೀನುಗಳಿಗೆ ಗ್ರಾಮ ಪಂಚಾಯಿತಿಗಳಿಂದ; 25 ಸೆಂಟ್ಸ್ ಮೇಲ್ಪಟ್ಟು ಒಂದು ಎಕರೆವರೆಗಿನ ಜಮೀನುಗಳಿಗೆ ತಾಲ್ಲೂಕು ಪಂಚಾಯಿತಿಗಳಿಂದ; ಒಂದು ಎಕರೆ ಮೇಲ್ಪಟ್ಟ ವಿಸ್ತೀರ್ಣದ ಜಮೀನುಗಳಿಗೆ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ವಿನ್ಯಾಸಗಳಿಗೆ ಅನುಮೋದನೆ ಪಡೆದು ನಮೂನೆ 9 ಮತ್ತು 11 ಗಳನ್ನು ಈ ಹಿಂದೆ ನೀಡಲಾಗುತ್ತಿದ್ದ ಬಗ್ಗೆ ಸಭೆಗೆ ವಿವರಿಸಿ ಪ್ರಸ್ತುತ ಸರ್ಕಾರದಿಂದ ಹೊರಡಿಸಲಾಗಿರುವ ಆದೇಶದ ಹಿನ್ನೆಲೆಯಲ್ಲಿ ಮಿತಿ ಇಲ್ಲದೇ ಎಲ್ಲ ಜಮೀನುಗಳಿಗೆ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ವಿನ್ಯಾಸ ಅನುಮೋದನೆ ಪಡೆಯಬೇಕಾಗಿರುವುದರಿಂದ ಕರಾವಳಿ ಭಾಗದಲ್ಲಿನ ಸಾರ್ವಜನಿಕರಿಗೆ ಅನಾನುಕೂಲವಾಗುತ್ತಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಕರಾವಳಿ ಭಾಗದಲ್ಲಿನ ಗ್ರಾಮಪಂಚಾಯಿತಿ ವ್ಯಾಪ್ತಿಯಿಂದ ಜಿಲ್ಲಾ ಕೇಂದ್ರದವರೆಗೆ ಸಾರ್ವಜನಿಕರು ಸಂಪರ್ಕ ಹೊಂದುವ ಸಮಸ್ಯೆಯನ್ನು ನಿವಾರಿಸಲು ಜಿಲ್ಲಾ ಕೇಂದ್ರದೊಂದಿಗೆ ಜಿಲ್ಲೆಯಲ್ಲಿ ವಿವಿಧ ಯೋಜನಾ ಪ್ರಾಧಿಕಾರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿಕಾರಿಗಳಿಗೆ ಅಧಿಕಾರ ಪ್ರತ್ಯಾಯೋಜಿಸುವುದರೊಂದಿಗೆ ಯೋಜನಾ ಪ್ರಾಧಿಕಾರಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಲು ತೀರ್ಮಾನಿಸಲಾಗಿರುತ್ತದೆ.

ಸದರಿ ಸಭೆಯ ತೀರ್ಮಾನದಂತೆ ದಕ್ಷಿಣ ಕನ್ನಡ, ಉತ್ತರ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ಕಾರ್ಯವ್ಯಾಪ್ತಿಯನ್ನು ನಿಗಧಿಪಡಿಸಲು ನಿರ್ಣಯಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 292 ಮೈಅಪ್ರಾ 2024,**

**ದಿನಾಂಕ:07.08.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4-K ಹಾಗೂ 76K ರಡಿ ಪ್ರದತ್ತವಾದ ಅಧಿಕಾರದನ್ವಯ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಗೆ ಒಳಪಡದೇ ಇರುವ ಗ್ರಾಮ

ಪಂಚಾಯಿತಿ ವ್ಯಾಪ್ತಿಯಲ್ಲಿನ ಒಂದು (01) ಎಕರೆ ಒಳಗಿನ ಜಮೀನುಗಳಿಗೆ ಅನುಮೋದನೆ ನೀಡುವ ಪ್ರಕರಣಗಳಿಗೆ ತಾಂತ್ರಿಕ ಅನುಮೋದನೆ ನೀಡಲು ಈ ಕೆಳಕಂಡಂತೆ ಅಧಿಕಾರ ವ್ಯಾಪ್ತಿಯನ್ನು ನಿಗಧಿಪಡಿಸಿ ಆದೇಶಿಸಲಾಗಿದೆ.

| ದಕ್ಷಿಣ ಕನ್ನಡ ಜಿಲ್ಲೆ | | |
|---|---|---|
| **ಪ್ರಾಧಿಕಾರ/ ಕಛೇರಿ** | **ಹುದ್ದೆ** | **ವಿಸ್ತರಿಸಿರುವ ಕಾರ್ಯ ವ್ಯಾಪ್ತಿ** |
| ಬಂಟ್ವಾಳ ಯೋಜನಾ ಪ್ರಾಧಿಕಾರ | ಸದಸ್ಯ ಕಾರ್ಯದರ್ಶಿಗಳು, ಬಂಟ್ವಾಳ | ಪ್ರಸ್ತುತ ಇರುವ ಕಾರ್ಯವ್ಯಾಪ್ತಿಗಳೊಂದಿಗೆ ಬಂಟ್ವಾಳ ತಾಲ್ಲೂಕಿಗೆ ಒಳಪಡುವ ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರಗಳು /ಗ್ರಾಮ ಪಂಚಾಯಿತಿಗಳು |
| ಮೂಡಬಿದರೆ ಯೋಜನಾ ಪ್ರಾಧಿಕಾರ | ಸದಸ್ಯ ಕಾರ್ಯದರ್ಶಿಗಳು, ಮೂಡಬಿದರೆ | ಪ್ರಸ್ತುತ ಇರುವ ಕಾರ್ಯವ್ಯಾಪ್ತಿಗಳೊಂದಿಗೆ ಮೂಡಬಿದರೆ ಮತ್ತು ಬೆಳ್ತಂಗಡಿ ತಾಲ್ಲೂಕುಗಳಿಗೆ ಒಳಪಡುವ ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರ / ಗ್ರಾಮ ಪಂಚಾಯಿತಿಗಳು |
| ಪುತ್ತೂರು ಯೋಜನಾ ಪ್ರಾಧಿಕಾರ | ಸದಸ್ಯ ಕಾರ್ಯದರ್ಶಿಗಳು, ಪುತ್ತೂರು | ಪ್ರಸ್ತುತ ಇರುವ ಕಾರ್ಯವ್ಯಾಪ್ತಿಗಳೊಂದಿಗೆ ಪುತ್ತೂರು ಮತ್ತು ಸುಳ್ಯ ತಾಲ್ಲೂಕಿಗೆ ಒಳಪಡುವ ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರ / ಗ್ರಾಮ ಪಂಚಾಯಿತಿಗಳು |
| ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಕಛೇರಿ, ಮಂಗಳೂರು | ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು | ಮುಲ್ಕಿ, ಉಲ್ಲಾಳ ತಾಲ್ಲೂಕು ಹಾಗೂ ಮಂಗಳೂರು ತಾಲ್ಲೂಕಿನ (ಸ್ಥಳೀಯ ಯೋಜನಾ ಪ್ರದೇಶಕ್ಕೆ ಒಳಪಡದ) ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರ / ಗ್ರಾಮ ಪಂಚಾಯಿತಿಗಳು |

| ಉತ್ತರ ಕನ್ನಡ ಜಿಲ್ಲೆ | | |
|---|---|---|
| **ಪ್ರಾಧಿಕಾರ/ ಕಛೇರಿ** | **ಹುದ್ದೆ** | **ವಿಸ್ತರಿಸಿರುವ ಕಾರ್ಯ ವ್ಯಾಪ್ತಿ** |
| ಶಿರಸಿ ಯೋಜನಾ ಪ್ರಾಧಿಕಾರ | ಸದಸ್ಯ ಕಾರ್ಯದರ್ಶಿಗಳು, ಶಿರಸಿ | ಪ್ರಸ್ತುತ ಇರುವ ಕಾರ್ಯವ್ಯಾಪ್ತಿಗಳೊಂದಿಗೆ ಶಿರಸಿ, ಹಳಿಯಾಳ ಮತ್ತು ದಾಂಡೇಲಿ ತಾಲ್ಲೂಕಿಗೆ ಒಳಪಡುವ ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರ / ಗ್ರಾಮ ಪಂಚಾಯಿತಿಗಳು |
| ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಕಛೇರಿ, ಕಾರವಾರ | ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು | ಪ್ರಸ್ತುತ ಇರುವ ಕಾರ್ಯವ್ಯಾಪ್ತಿಗಳೊಂದಿಗೆ ಅಂಕೋಲಾ, ಕುಮಟಾ, ಹೊನ್ನಾವರ ಮತ್ತು ಭಟ್ಕಳ ತಾಲ್ಲೂಕಿಗೆ ಒಳಪಡುವ ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರ / ಗ್ರಾಮ ಪಂಚಾಯಿತಿಗಳು |
| ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಕಛೇರಿ, ಶಿರಸಿ | ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು | ಪ್ರಸ್ತುತ ಇರುವ ಕಾರ್ಯವ್ಯಾಪ್ತಿಗಳೊಂದಿಗೆ ಯಲ್ಲಾಪುರ, ಮುಂಡಗೋಡ ಮತ್ತು ಸಿದ್ದಾಪುರ ತಾಲ್ಲೂಕಿಗೆ ಒಳಪಡುವ ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರ / ಗ್ರಾಮ ಪಂಚಾಯಿತಿಗಳು |

| ಉಡುಪಿ ಜಿಲ್ಲೆ | | |
|---|---|---|
| **ಪ್ರಾಧಿಕಾರ/ ಕಛೇರಿ** | **ಅಧಿಕಾರ ಪ್ರತ್ಯಾಯೋಜಿಸಿರುವ ಅಧಿಕಾರಿ** | **ಅಧಿಕಾರ ಪ್ರತ್ಯಾಯೋಜಿಸಿರುವ ತಾಲ್ಲೂಕುಗಳು** |
| ಕುಂದಾಪುರ ಯೋಜನಾ ಪ್ರಾಧಿಕಾರ | ಸದಸ್ಯ ಕಾರ್ಯದರ್ಶಿಗಳು, ಕುಂದಾಪುರ | ಪ್ರಸ್ತುತ ಇರುವ ಕಾರ್ಯವ್ಯಾಪ್ತಿಗಳೊಂದಿಗೆ ಕುಂದಾಪುರ ಮತ್ತು ಬೈಂದೂರು ತಾಲ್ಲೂಕಿಗೆ ಒಳಪಡುವ ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರ / ಗ್ರಾಮ ಪಂಚಾಯಿತಿಗಳು |
| ಕಾಪು ಯೋಜನಾ ಪ್ರಾಧಿಕಾರ | ಸದಸ್ಯ ಕಾರ್ಯದರ್ಶಿಗಳು, ಕಾಪು | ಪ್ರಸ್ತುತ ಇರುವ ಕಾರ್ಯವ್ಯಾಪ್ತಿಗಳೊಂದಿಗೆ ಕಾಪು ಮತ್ತು ಕಾರ್ಕಳ ತಾಲ್ಲೂಕಿಗೆ ಒಳಪಡುವ |

| | | |
|---|---|---|
| | | ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರ / ಗ್ರಾಮ ಪಂಚಾಯಿತಿಗಳು |
| ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಕಛೇರಿ, ಉಡುಪಿ | ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು | ಪ್ರಸ್ತುತ ಇರುವ ಕಾರ್ಯವ್ಯಾಪ್ತಿಗಳೊಂದಿಗೆ ಉಡುಪಿ, ಬ್ರಹ್ಮಾವರ ಹಾಗೂ ಹೆಬ್ರಿ ತಾಲ್ಲೂಕಿನ ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರ / ಗ್ರಾಮ ಪಂಚಾಯಿತಿಗಳು |

ಮೇಲ್ಕಂಡ ಅಧಿಕಾರಿಗಳು ತಮ್ಮ ವ್ಯಾಪ್ತಿಗೆ ಒಳಪಡುವ ಪ್ರತಿ ತಾಲ್ಲೂಕಿನ ಕಾರ್ಯವಾಪ್ತಿಯ ಒಳಗಡೆ ಬರುವ ಪ್ರಕರಣಗಳನ್ನು ಸಕಾಲದಲ್ಲಿ ಇತ್ಯರ್ಥಗೊಳಿಸಲು ನಿರ್ದೇಶಿಸಿದೆ.

**ತಾಲ್ಲೂಕು ಪಂಚಾಯಿತಿ ಕ್ರಮ:**

ತಾಲ್ಲೂಕು ಪಂಚಾಯಿತಿ ಕಛೇರಿಯಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಅಧಿಕಾರಿಗಳಿಗೆ ಕಾರ್ಯನಿರ್ವಹಿಸಲು ಅಗತ್ಯ ಸ್ಥಳಾವಕಾಶ, ಪೀ ಕಂಪ್ಯೂಟರ್, ಸಿಬ್ಬಂದಿ(ಕನಿಷ್ಠ 01 ಪ್ರಥಮ ದರ್ಜೆ ಸಹಾಯಕ/ದ್ವಿತೀಯ ದರ್ಜೆ ಸಹಾಯಕ ಹಾಗೂ 01 ಡಿ ಗ್ರೂಪ್ ನೌಕರ) ಒದಗಿಸುವುದು.

**ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಕ್ರಮ:**

1. ಕ್ರಮ ಕೈಗೊಂಡ ಕಡತದ ಒಂದು ಸಂಪೂರ್ಣ ಪ್ರತಿಯನ್ನು ತಮ್ಮ ಕಛೇರಿಯಲ್ಲಿಯೂ ಸಹ ನಿರ್ವಹಿಸುವುದು.
2. ಕ್ರಮ ಕೈಗೊಂಡ ಕಡತಗಳ ಮಾಸಿಕ ವರದಿಯನ್ನು ಮೈಸೂರು ವಿಭಾಗೀಯ ಕಛೇರಿಗೆ ಸಲ್ಲಿಸುವುದು.
3. ಮೈಸೂರು ವಿಭಾಗೀಯ ಕಛೇರಿಯು ಮಾಸಿಕ ವರದಿಯನ್ನು ಕ್ರೋಢೀಕರಿಸುವುದು.
4. ಮೈಸೂರು ವಿಭಾಗೀಯ ಕಛೇರಿಯು ಕಾಲಕಾಲಕ್ಕೆ ಕಛೇರಿ ತಪಾಸಣೆ ನಡೆಸಿ ಯಾವುದೇ ಕಡತ ಬಾಕಿ ಇಲ್ಲದಂತೆ ಖಾತರಿಪಡಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಲತಾ.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ,
(ಅಭಿವೃದ್ಧಿ ಪ್ರಾಧಿಕಾರ ಮತ್ತು ನಯೋಸೇ)
ನಗರಾಭಿವೃದ್ಧಿ ಇಲಾಖೆ.

**ಇವರಿಗೆ**

1. ಅಪರ ಮುಖ್ಯಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು, ಮತ್ತು ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ.

3. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು, ಕೇಂದ್ರ ಕಚೇರಿ, ಬೆಂಗಳೂರು.
4. ನಗರ ಮತ್ತು ಗ್ರಾಮಾಂತರ ಯೋಜನಾ ಹೆಚ್ಚುವರಿ ನಿರ್ದೇಶಕರು, ವಲಯ ಕಚೇರಿ ಧಾರವಾಡ.
5. ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಚೇರಿ, ಬೆಂಗಳೂರು, ಮೈಸೂರು, ಕಲಬುರಗಿ.
6. ರಾಜ್ಯದ ಎಲ್ಲಾ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಮುಖಾಂತರ.
7. ನಗರ ಯೋಜಕ ಸದಸ್ಯರು ಹಾಗೂ ಸದಸ್ಯ ಕಾರ್ಯದರ್ಶಿಗಳು, ರಾಜ್ಯದ ಎಲ್ಲಾ ನಗರಾಭಿವೃದ್ಧಿ / ಯೋಜನಾ ಪ್ರಾಧಿಕಾರಗಳು, ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಮುಖಾಂತರ.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿ:**

1. ಸನ್ಮಾನ್ಯ ಸಭಾಧ್ಯಕ್ಷರು, ಕರ್ನಾಟಕ ವಿಧಾನಸಭೆ ರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.

ಸಂಖ್ಯೆ: ನಗ್ರಾಯೋ:ಜಂನಿ:120:CIRC:2024-25
ಸರ್ಕಾರದ ಆದೇಶ ಸಂಖ್ಯೆ: [illegible]
ನಅಇ 292 ಮೈಅಪ್ರಾ 2024
ದಿನಾಂಕ: 07-08-2024.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ,
ಬಹುಮಹಡಿಗಳ ಕಟ್ಟಡ, 4ನೇ ಹಂತ,
ಡಾ: ಅಂಬೇಡ್ಕರ್ ವೀದಿ, ಬೆಂಗಳೂರು.
ದಿನಾಂಕ: 29 AUG 2024

**ಯಥಾ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.**

1. ನಗರ ಮತ್ತು ಗ್ರಾಮಾಂತರ ಯೋಜನಾ ಅಪರ ನಿರ್ದೇಶಕರು, ವಲಯ ಕಛೇರಿ, ಧಾರವಾಡ.
2. ನಗರ ಮತ್ತು ಗ್ರಾಮಾಂತರ ಯೋಜನಾ ಅಪರ ನಿರ್ದೇಶಕರು, ಕರ್ನಾಟಕ ರಾಜ್ಯ ನಗರ ಯೋಜನಾ ಮಂಡಳಿ, ಬೆಂಗಳೂರು.
3. ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಛೇರಿ, ಬೆಂಗಳೂರು/ಮೈಸೂರು/ ಕಲಬುರಗಿ.
4. ಆಯುಕ್ತರು, ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು.
5. ಸದಸ್ಯ ಕಾರ್ಯದರ್ಶಿಗಳು, ರಾಜ್ಯದ ಎಲ್ಲಾ ನಗರ ಯೋಜನಾ ಪ್ರಾಧಿಕಾರಗಳು.
6. ಎಲ್ಲಾ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಕಛೇರಿಗಳಿಗೆ.
7. ಮುಖ್ಯಾಧಿಕಾರಿಗಳು/ಪೌರಾಯುಕ್ತರು, ಪುರಸಭೆ/ನಗರಸಭೆ/ಪಟ್ಟಣ ಪಂಚಾಯತಿ ಯೋಜನಾ ಪ್ರಾಧಿಕಾರಗಳು.
8. ಕೇಂದ್ರ ಕಛೇರಿಯ ಎಲ್ಲಾ ತಾಂತ್ರಿಕ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ.
9. ಸದರಿ ಸುತ್ತೋಲೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು ಸಂಬಂಧಪಟ್ಟ ವಿಷಯ ನಿರ್ವಾಹಕರಿಗೆ.
10. ಹೆಚ್ಚುವರಿ ಪ್ರತಿಗಳು.

ನಗರ ಮತ್ತು ಗ್ರಾಮಾಂತರ ಯೋಜನಾ
ನಿರ್ದೇಶಕರ ಪರವಾಗಿ

39 NK(Madhuri)Circ